**ಸಾಕ್ಷಿಗೆ ದಿನಾಂಕ 07.05.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ ಬಿಸಿವಿ ವಕೀಲರಿಂದ:**

1. ನಾನು ಈ ಪ್ರಕರಣದಲ್ಲಿ ವೈದ್ಯ ಸಾಕ್ಷಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ಗಾಯಾಳುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿದಾರರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ **17** | ಹೊರರೋಗಿ ದಾಖಲೆ |
| ನಿ.ಪಿ **18** | ಎಕ್ಸ್-ರೇ |

**3.** ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ

**ಪಾಟೀ ಸವಾಲು: 2ನೇ ಎದುರುದಾರರ ಪರ ಶ್ರೀ ಎನ್ ಎಂ. ಪಿ. ವಕೀಲರಿಂದ:**

ಅರ್ಜಿದಾರರಿಗೆ ಮೂಲತಃ ಚಿಕಿತ್ಸೆ ನೀಡಿರುವ ವೈದ್ಯನಾಗಿರುವುದಿಲ್ಲ. ಅರ್ಜಿದಾರರನ್ನು ದೈಹಿಕ ಅಂಗನ್ಯೂನತೆಯನ್ನು ನಿರ್ಧರಿಸುವ ಸಲುವಾಗಿ ಮಾತ್ರ ಪರೀಕ್ಷೆ ಮಾಡಿರುತ್ತೇನೆ ಎಂದರೆ ಸರಿ. ಅರ್ಜಿದಾರರ ಡಿಸ್ಚಾರ್ಜ್ ಸಮ್ಮರಿಯನ್ನು ನೋಡಿರುತ್ತೇನೆ. ಅರ್ಜಿದಾರರಿಗೆ ಚಿಕಿತ್ಸೆ ನೀಡಿದ ವೈದ್ಯರ ಅಭಿಪ್ರಾಯ ಪಡೆದಿಲ್ಲ ಎಂದರೆ ಸರಿ. ಅರ್ಜಿದಾರರ ಮುಂದುವರೆದ ಚಿಕಿತ್ಸಾ ದಾಖಲೆಗಳನ್ನು ನೋಡಿರುವುದಿಲ್ಲ. ಟಿಬಿಯ ಮೂಳೆಗೆ ಮಾತ್ರ ಶಸ್ತ್ರ ಚಿಕಿಸ್ಸೆ ಆಗಿರುತ್ತದೆ ಎಂದರೆ ಸರಿ. ಅರ್ಜಿದಾರರ ಮೂಳೆ ಮುರಿತ ಕೂಡಿಕೊಂಡಿರುತ್ತದೆ. ಮೂಳೆ ಮುರಿತ ಮೂಳೆಯ ಮಧ್ಯಭಾಗದಲ್ಲಿ ಆಗಿರುತ್ತದೆ ಎಂದರೆ ಸರಿ. ಅರ್ಜಿದಾರರಿಗೆ ಮೂಳೆ ಮುರಿತ ಮಧ್ಯಭಾಗದಲ್ಲಿ ಆಗಿರುವುದರಿಂದ ಮಂಡಿ ಮಡಿಚಲು ಮತ್ತು ಇತರೆ ಕಾರ್ಯಗಳಿಗೆ ತೊಂದರೆ ಆಗುವುದಿಲ್ಲ

ಎಂದರೆ ಸರಿಯಲ್ಲ. ಅರ್ಜಿದಾರರ ಒಳಜೋಡಣೆಗಳನ್ನು ತೆಗೆಯದೇ ಅವರ ದೈಹಿಕ ಅಂಗನ್ಯೂನತೆಯನ್ನು ನಿಖರವಾಗಿ ಹೇಳಲು ಬರುವುದಿಲ್ಲ ಎಂದರೆ ಸರಿ. ಅರ್ಜಿದಾರರ ಒಳಜೋಡಣೆಯನ್ನು ತೆಗೆದ ನಂತರ ದೈಹಿಕ ಅಂಗನ್ಯೂನತೆಯು ಶೇಖಡಾ ಪ್ರಮಾಣದಲ್ಲಿ ಹೆಚ್ಚು ಕಡಿಮೆ ಆಗುವ ಸಾಧ್ಯತೆ ಇದೆ ಎಂದರೆ ಸರಿಯಲ್ಲ. ಅರ್ಜಿದಾರರ ಒಳಜೋಡಣೆಯನ್ನು ತೆಗೆಯದೇ ಹೋದರೆ ಅವರಿಗೆ ನೋವು ಇರುತ್ತದೆ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಕಂಡಿಕೆಯ 6 ಮತ್ತು 7 ರಲ್ಲಿ ಹೇಳಲಾದ ತೊಂದರೆಗಳು ಸುಳ್ಳು ಎಂದರೆ ಸರಿಯಲ್ಲ. ಭಾರತ ಸರ್ಕಾರದ ನಿಯಾಮವಾಳಿಗಳ ಪ್ರಕಾರ ಅರ್ಜಿದಾರರ ದೈಹಿಕ ಅಂಗನ್ಯೂನತೆಯನ್ನು ನಿರ್ಧರಿಸಿರುತ್ತೇವೆ. ಭಾರತ ಸರ್ಕಾರದ ನಿಯಾಮವಾಳಿಗಳ ಪ್ರಕಾರ ನಿಗದಿತ ಅಂಗಕ್ಕೆ ನಿರ್ಧರಿಸಲಾದ ಅಂಗನ್ಯೂನತೆಯನ್ನು 1/2 ನ್ನು ಸಂಪೂರ್ಣ ದೇಹಕ್ಕೆ ಅಳವಡಿಸಬೇಕೆಂದು ಎಲ್ಲಿಯೂ ಹೇಳಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರ ನಿಗಧಿತ ಅಂಗಕ್ಕೆ ನಿರ್ಧರಿಸಲಾದ ಅಂಗನ್ಯೂನತೆಯನ್ನು 1/3 ರಷ್ಟು ಸಂಪೂರ್ಣ ದೇಹಕ್ಕೆ ಪರಿಗಣಿಸಬೇಕಾಗುತ್ತದೆ ಎಂದರೆ ಸರಿಯಲ್ಲ. ಅರ್ಜಿದಾರರು ಸ್ವಲ್ಪ ತೊಂದರೆಯಿಂದ ದಿನನಿತ್ಯದ ಕೆಲಸ ಮಾಡುತ್ತಾರೆ ಎಂದರೆ ಸರಿ. ಅರ್ಜಿದಾರರ ಅಂಗನ್ಯೂನತೆಯ್ನು ಹೇಗೆ ನಿರ್ಧರಿಸಲಾಯಿತು ಎಂದು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಹೇಳಿರುಎವುದಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ಅನೂಕೂಲವಾಗಲೆಂದು ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

1ನೇ ಎದುರುದಾರರು ಗೈರು ಹಾಜರು, ಆದುದರಿಂದ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ.

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**